## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2016-17ನೇ ಸಾಲಿನಲ್ಲಿ ರಾಜ್ಯದ ಕೆಲವೊಂದು ಜಿಲ್ಲೆಗಳ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 259 ಟಿಎನ್‌ಆರ್ 2016, ದಿನಾಂಕ:06-10-2016.

2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 259 ಟಿಎನ್‌ಆರ್ 2016(ಭಾಗ-1) ದಿನಾಂಕ:06-10-2016

3. ದಿನಾಂಕ:29-10-2016ರಂದು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆಯ ನಡವಳಿ*

*****

ಪ್ರಸ್ತಾವನೆ:

ಕೇಂದ್ರ ಸರ್ಕಾರದ 2009ರ ಬರ ನಿರ್ವಹಣೆ ಕೈಪಿಡಿಯ ಮಾರ್ಗಸೂಚಿಯ ಪ್ರಕಾರ ಕೆಳಕಂಡ ಮಾನದಂಡಗಳ ಆಧಾರದ ಮೇರೆಗೆ ಬರಪೀಡಿತ ಪ್ರದೇಶವೆಂದು ಘೋಷಿಸಲಾಗುತ್ತದೆ.

1. ಮಳೆ ಕೊರತೆ,
2. ತೇವಾಂಶ ಕೊರತೆ (Moisture Adequacy Index-MAI) ಮತ್ತು
3. ಸತತ ನಾಲ್ಕು ವಾರಗಳ ಶುಷ್ಕ ವಾತಾವರಣ.

ಮುಂಗಾರು ಮಳೆಯು 2016ನೇ ಜೂನ್ 1ರಿಂದ ಸೆಪ್ಟಂಬರ್ 30ರವರೆಗೆ ಸಂಪೂರ್ಣವಾಗಿ ವಿಫಲವಾಗಿದ್ದರಿಂದ, ರಾಜ್ಯದಲ್ಲಿ ಮೇಲೆ ಓದಲಾದ (1) ಮತ್ತು (2)ರ ಸರ್ಕಾರಿ ಆದೇಶಗಳಲ್ಲಿ 110 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿರುತ್ತದೆ. ರಾಜ್ಯದಲ್ಲಿ 2016ರ ಅಕ್ಟೋಬರ್ ತಿಂಗಳಿನಲ್ಲಿ ಸೆಪ್ಟಂಬರ್ ತಿಂಗಳಿಗಿಂತ -78% ರಷ್ಟು ಮಳೆ ಕೊರತೆ ಇದ್ದು, ತೇವಾಂಶ ಕೊರತೆಯು 2016ರ ಅಕ್ಟೋಬರ್ ತಿಂಗಳ ಎಲ್ಲಾ ವಾರಗಳಲ್ಲಿಯೂ ಮುಂದುವರೆದಿರುತ್ತದೆ. ಇದು ರಾಜ್ಯದಲ್ಲಿ ಬಿತ್ತನೆಯ ಪ್ರದೇಶದ ಮೇಲೆ ತೀವ್ರ ಪರಿಣಾಮ ಉಂಟು ಮಾಡಿರುತ್ತದೆ. ಮೇಲೆ ತಿಳಿಸಲಾಗಿರುವ ಮಾನದಂಡಗಳ ಆಧಾರದ ಮೇರೆಗೆ 2016ರ ಜೂನ್ 1ರಿಂದ ಅಕ್ಟೋಬರ್ 31ರವರೆಗೆ ತೆಗೆದುಕೊಂಡಲ್ಲಿ ರಾಜ್ಯದಲ್ಲಿ ಇನ್ನೂ ಹೆಚ್ಚುವರಿಯಾಗಿ 29 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲು ಅರ್ಹತೆ ಹೊಂದಿರುವ ಅಂಶವನ್ನು ದಿನಾಂಕ:29-10-2016ರಂದು ನಡೆದ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಪರಿಗಣಿಸಿ, ಸದರಿ 29 ತಾಲ್ಲೂಕುಗಳನ್ನು ಸಹ ಬರ ಪೀಡಿತ ಪ್ರದೇಶಗಳೆಂದು ಘೋಷಿಸಲು ಸಮಿತಿಯು ತೀರ್ಮಾನ ತೆಗೆದುಕೊಂಡಿತು. ಈ ಹಿನ್ನೆಲೆಯಲ್ಲಿ ಕೆಳಕಂಡಂತೆ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 259 ಟಿಎನ್‌ಆರ್ 2016(ಭಾಗ-1), ಬೆಂಗಳೂರು,ದಿನಾಂಕ:29-10-2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನಲ್ಲಿ ರಾಜ್ಯದ 15 ಜಿಲ್ಲೆಗಳ ಈ ಕೆಳಕಂಡ 29 ತಾಲ್ಲೂಕುಗಳನ್ನು ಹೆಚ್ಚುವರಿಯಾಗಿ (ನೀರಾವರಿ ಪ್ರದೇಶ ಹೊರತುಪಡಿಸಿ) ಬರಪೀಡಿತ ಪ್ರದೇಶಗಳೆಂದು ಘೋಷಿಸಿ ಸರ್ಕಾರ ಆದೇಶಿಸಿದೆ.

| ಕ್ರ.ಸಂ | ಜಿಲ್ಲೆ | ಕ್ರ.ಸಂ | ತಾಲ್ಲೂಕು |
|---|---|---|---|
| 1 | ಬೆಂಗಳೂರು ನಗರ | 1 | ಆನೇಕಲ್ |
| | | 2 | ಬೆಂಗಳೂರು ಉತ್ತರ |
| | | 3 | ಬೆಂಗಳೂರು ದಕ್ಷಿಣ |
| | | 4 | ಬೆಂಗಳೂರು ಪೂರ್ವ |
| 2 | ಬೆಂಗಳೂರು ಗ್ರಾಮಾಂತರ | 5 | ದೇವನಹಳ್ಳಿ |
| 3 | ಚಿಕ್ಕಬಳ್ಳಾಪುರ | 6 | ಗೌರಿಬಿದನೂರು |

| | | | |
|---|---|---|---|
| 4 | ಚಿತ್ರದುರ್ಗ | 7 | ಹೊಳಲ್ಕೆರೆ |
| 5 | ದಾವಣಗೆರೆ | 8 | ಚನ್ನಗಿರಿ |
| | | 9 | ದಾವಣಗೆರೆ |
| | | 10 | ಹರಿಹರ |
| | | 11 | ಹೊನ್ನಾಳಿ |
| 6 | ಬಳ್ಳಾರಿ | 12 | ಹಡಗಲಿ |
| | | 13 | ಹೊಸಪೇಟೆ |
| | | 14 | ಕೂಡ್ಲಗಿ |
| | | 15 | ಶಿರಗುಪ್ಪ |
| | | 16 | ಹಗರಿಬೊಮ್ಮನಹಳ್ಳಿ |
| 7 | ಕೊಪ್ಪಳ | 17 | ಕೊಪ್ಪಳ |
| | | 18 | ಕುಷ್ಟಗಿ |
| 8 | ರಾಯಚೂರು | 19 | ಮಾನ್ವಿ |
| 9 | ಬೆಳಗಾವಿ | 20 | ಹುಕ್ಕೇರಿ |
| | | 21 | ರಾಯಭಾಗ |
| 10 | ಬಾಗಲಕೋಟೆ | 22 | ಬಾಗಲಕೋಟೆ |
| | | 23 | ಜಮಖಂಡಿ |
| 11 | ವಿಜಯಪುರ | 24 | ಬಸವನಬಾಗೇವಾಡಿ |
| 12 | ಹಾವೇರಿ | 25 | ರಾಣೇಬೆನ್ನೂರು |
| 13 | ಧಾರವಾಡ | 26 | ಹುಬ್ಬಳ್ಳಿ |
| 14 | ಕೊಡಗು | 27 | ಸೋಮವಾರಪೇಟೆ |
| 15 | ಉತ್ತರ ಕನ್ನಡ | 28 | ಮುಂಡಗೋಡ |
| | | 29 | ಯಲ್ಲಾಪುರ |

ಬರಪೀಡಿತ ಪ್ರದೇಶವೆಂದು ಘೋಷಿಸಿರುವ ತಾಲ್ಲೂಕು/ ಹೋಬಳಿಗಳ ಭೂರಹಿತ ಕಾರ್ಮಿಕರು ಸಣ್ಣ ಮತ್ತು ಅತೀಸಣ್ಣ ರೈತರಿಗೆ ಉದ್ಯೋಗ ಖಾತರಿ ಯೋಜನೆಯಡಿ ಉದ್ಯೋಗ ಒದಗಿಸುವ ಕ್ರಮ, ಕುಡಿಯುವ ನೀರು ಸರಬರಾಜು, ಮೇವು ಸರಬರಾಜು, ಜಾನುವಾರು ಸಂರಕ್ಷಣೆ ಇತ್ಯಾದಿ ಬರಪರಿಹಾರ ಕಾರ್ಯಗಳನ್ನು ಮಾತ್ರ ಎಸ್.ಡಿ.ಆರ್.ಎಫ್/ಎನ್.ಡಿ.ಆರ್.ಎಫ್ ಮಾರ್ಗಸೂಚಿಯ ಪ್ರಕಾರ ಕೈಗೊಳ್ಳಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಉಮಾಪತಿ)
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ)

ಇವರಿಗೆ:

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು – ಈ ಆದೇಶವನ್ನು ಕೂಡಲೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ.), ಕೊಠಡಿ ಸಂಖ್ಯೆ: 516, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಕಳುಹಿಸಲು ಕೋರಿದೆ.

ಪ್ರತಿ:

1) ಮಹಾಲೇಖಪಾಲರು(ಎ&ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು

3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
8) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು
9) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
10) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
11) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
12) ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
13) ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
14) ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು
15) ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
16) ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು / ಬೆಳಗಾವಿ / ಕಲಬುರಗಿ ವಿಭಾಗಗಳು.
17) ಎಲ್ಲಾ ಜಿಲ್ಲಾಧಿಕಾರಿಗಳು.
18) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
19) ರಾಜ್ಯದ ಎಲ್ಲಾ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು,
20) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
21) ಆಯುಕ್ತರು, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು
22) ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು
23) ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ಉಸ್ತುವಾರಿ ಕೇಂದ್ರ, ಅಟ್ಟೂರು ಬಡಾವಣೆ, ಯಲಹಂಕ, ಬೆಂಗಳೂರು
24) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
25) ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
26) ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು
27) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
28) ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
29) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
30) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
31) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
32) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
33) ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
34) ಮಾನ್ಯ ಸಣ್ಣ ನೀರಾವರಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

35) ಮಾನ್ಯ ಜಿಲ್ಲಾ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ [illegible]
36) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
37) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
38) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
39) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
40) ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು
41) ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
42) ಪತ್ರಿಕಾ ಮೇಜು – ಪತ್ರಿಕಾ ಪ್ರಕಟಣೆಗಾಗಿ
43) ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಲೆಕ್ಕ ಪತ್ರ ಶಾಖೆ.
44) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು..